**All India Radio: Bangalore**
**National Bulletin In Kannada**
**17.04.2025 13.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**17.04.2025 13.10 p.m.**

**<><><><>**

ಮುಖ್ಯಾಂಶಗಳು

1. ಮಾವೋವಾದಿಗಳ ನಿರ್ಮೂಲನೆಗೆ ಕೇಂದ್ರ ಮೀಸಲು ಪೊಲೀಸ್ ಪಡೆಯ ಪಾತ್ರ ಅತ್ಯಂತ ಮಹತ್ವದ್ದಾಗಿದೆ: ಗೃಹ ಸಚಿವ ಅಮಿತ್ ಶಾ
2. ರಕ್ಷಣಾ ವಲಯವು ಸ್ವಾವಲಂಬನೆಯ ಹಾದಿಯಲ್ಲಿ ಸಾಗುತ್ತಿದೆ: ರಾಜನಾಥ್ ಸಿಂಗ್
3. ಸುಪ್ರೀಂಕೋರ್ಟ್‌ನಲ್ಲಿಂದು ವಕ್ಫ್ ತಿದ್ದುಪಡಿ ಕಾಯ್ದೆ ಸಾಂವಿಧಾನಿಕ ಸಿಂಧುತ್ವ ಪ್ರಶ್ನಿಸಿದ ಅರ್ಜಿ ವಿಚಾರಣೆ ಆರಂಭ
4. ಕ್ರಿಕೆಟ್: ಐಪಿಎಲ್ ಟಿ-೨೦ ಪಂದ್ಯಾವಳಿಯಲ್ಲಿ ಇಂದು ಮುಂಬೈ ಇಂಡಿಯನ್ಸ್-ಸನ್ ರೈಸರ್ಸ್ ಹೈದರಾಬಾದ್ ಮುಖಾಮುಖಿ
5. ಐಎಸ್‌ಎಸ್‌ಎಫ್ ಪೆರುವಿನ ಲಿಮಾದಲ್ಲಿ ನಡೆಯುತ್ತಿರುವ ಐಎಸ್‌ಎಸ್‌ಎಫ್ ವಿಶ್ವಕಪ್ ಶೂಟಿಂಗ್ ಸ್ಪರ್ಧೆಯ ಮಹಿಳಾ ಸ್ಕೀಟ್ ಫೈನಲ್‌ನಲ್ಲಿ ರೈಜಾ ಧಿಲ್ಲಾನ್ ಹೋರಾಟ

<><><><>

ಮುಂದಿನ ಮಾರ್ಚ್ ವೇಳೆಗೆ ದೇಶದಿಂದ ಮಾವೋವಾದಿಗಳನ್ನು ಅನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡಲಾಗುವುದು, ಇದರಲ್ಲಿ ಕೇಂದ್ರ ಮೀಸಲು ಪೊಲೀಸ್ ಪಡೆ - ಸಿಆರ್‌ಪಿಎಫ್ ಯೋಧರು ಪ್ರಮುಖ ಪಾತ್ರ ವಹಿಸಲಿದ್ದಾರೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ತಿಳಿಸಿದ್ದಾರೆ. ಸಿಆರ್‌ಪಿಎಫ್‌ನ ೮೬ನೇ ಸಂಸ್ಥಾಪನಾ ದಿನಾಚರಣೆಗೆ ಸಂಬಂಧಿಸಿದಂತೆ ಇಂದು ಮಧ್ಯಪ್ರದೇಶದ ನೀಮಚ್‌ನಲ್ಲಿ ಆಯೋಜಿಸಲಾದ ಸಮಾರಂಭವನ್ನುದ್ದೇಶಿಸಿ ಅವರು ಮಾತನಾಡಿದರು. ನಮ್ಮ ಕೋಬ್ರಾ ಬೆಟಾಲಿಯನ್‌ನ ಸೈನಿಕರು ದೇಶವನ್ನು ನಕ್ಸಲ್ ಮುಕ್ತಗೊಳಿಸುವಲ್ಲಿ ಅಭೂತಪೂರ್ವ ಕೆಲಸ ಮಾಡುತ್ತಿದ್ದಾರೆ. ನಕ್ಸಲಿಸಂ ಅನ್ನು ಸಂಪೂರ್ಣವಾಗಿ ತೊಡೆದುಹಾಕುವ ದೇಶದ ಸಂಕಲ್ಪವು ನಿಮ್ಮ ಅದಮ್ಯ ಧೈರ್ಯದ ಬಲದಿಂದ ಈಡೇರುತ್ತದೆ ಎಂದು ಸಚಿವರು ಹೇಳಿದರು. ದೇಶದ ಇತಿಹಾಸ ಬರೆಯಲ್ಪಟ್ಟಾಗ, ಭದ್ರತಾ ಪಡೆಗಳ ಅಮರ ಹುತಾತ್ಮರ ಶೌರ್ಯದ ಕಥೆಯನ್ನು ಮೊದಲು ಸುವರ್ಣಾಕ್ಷರಗಳಲ್ಲಿ ಬರೆಯಲಾಗುತ್ತದೆ. ಅವರ ತ್ಯಾಗ, ಬಲಿದಾನ ಎಂದಿಗೂ ಸ್ಮರಣೀಯ. ದೇಶವು ಬಲಿಷ್ಠ ಮತ್ತು ಸಮೃದ್ಧವಾಗುತ್ತಿದೆ, ಅದರಲ್ಲಿ ಹುತಾತ್ಮ ಯೋಧರ ಕುಟುಂಬದ ಕೊಡುಗೆ ಹೋಲಿಸಲಾಗದು ಅಮಿತ್ ಶಾ ತಿಳಿಸಿದ್ದಾರೆ.

**ಧ್ವನಿ : ಅಮಿತ್ ಶಾ (೨೭ ಸೆಕೆಂಡ್‌ಗಳು)**

ಕಾಶ್ಮೀರ ಕಣಿವೆಗಳಲ್ಲಿ ದುರುದ್ದೇಶಪೂರಿತ ಉದ್ದೇಶದಿಂದ ಅಶಾಂತಿ ಹರಡುವ ಭಯೋತ್ಪಾದಕರ ವಿರುದ್ಧ ಹೋರಾಡುವುದಾಗಲಿ, ಈಶಾನ್ಯದಲ್ಲಿ ಶಾಂತಿ ಸ್ಥಾಪಿಸುವಲ್ಲಿ ಸಿಆರ್‌ಪಿಎಫ್ ಯೋಧರು ದೊಡ್ಡ ಕೊಡುಗೆ ನೀಡಿದ್ದಾರೆ ಎಂದು ಹೇಳಿದರು. ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದಲ್ಲಿ, ನಮ್ಮ ಸರ್ಕಾರ ಸಿಆರ್‌ಪಿಎಫ್‌ನ ಕಲ್ಯಾಣಕ್ಕಾಗಿ ಹಲವು ಪ್ರಮುಖ ಕ್ರಮಗಳನ್ನು ತೆಗೆದುಕೊಂಡಿದೆ. ನಮ್ಮ ಧೈರ್ಯಶಾಲಿ ಯೋಧರ ನ್ನು ಉನ್ನತೀಕರಿಸಲು, ಅವರನ್ನು ಗೌರವಿಸಲು ಮತ್ತು ಅವರ ಕುಟುಂಬಗಳಿಗೆ ಅನೇಕ ಸೌಲಭ್ಯಗಳನ್ನು ಒದಗಿಸಲು ನಾವು ಕೆಲಸ ಮಾಡಿದ್ದೇವೆ ಎಂದು ಅಮಿತ್ ಶಾ ವಿವರಿಸಿದರು. ಈ ಸಂದರ್ಭದಲ್ಲಿ, ಸಿಆರ್‌ಪಿಎಫ್ ಯೋಧರಿಗೆ ಶೌರ್ಯ ಪ್ರಶಸ್ತಿಗಳನ್ನು ನೀಡಿ ಗೌರವಿಸಿದರು. ಶಹೀದ್ ಸ್ಥಳದಲ್ಲಿ ಹುತಾತ್ಮರಿಗೆ ಗೌರವ ಸಲ್ಲಿಸಿದರು. ಮಧ್ಯಪ್ರದೇಶದ ಮುಖ್ಯಮಂತ್ರಿ ಡಾ. ಮೋಹನ್ ಯಾದವ್ ಮತ್ತು ಸಿಆರ್‌ಪಿಎಫ್ ಮಹಾನಿರ್ದೇಶಕ ಜ್ಞಾನೇಂದ್ರ ಪ್ರತಾಪ್ ಸಿಂಗ್ ಅವರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

<><><><>

ರಕ್ಷಣಾ ವಲಯವು ಸ್ವಾವಲಂಬನೆಯ ಹಾದಿಯಲ್ಲಿ ಮುಂದುವರಿಯುತ್ತಿದೆ ಮತ್ತು ಜಾಗತಿಕ ಪೂರೈಕೆ ಸರಪಳಿಗಳನ್ನು ರೂಪಿಸುವಲ್ಲಿ ಪ್ರಮುಖ ಪಾತ್ರ ವಹಿಸಲು ಸಿದ್ಧವಾಗಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ. ನವದೆಹಲಿಯಲ್ಲಿಂದು ನಡೆದ ರಕ್ಷಣಾ ಸಮಾವೇಶದ ಉದ್ಘಾಟನಾ ಅಧಿವೇಶನದಲ್ಲಿ ಮಾತನಾಡಿದ ಅವರು, ರಕ್ಷಣಾ ಕ್ಷೇತ್ರದ ಸಾಮರ್ಥ್ಯಗಳನ್ನು ಹೆಚ್ಚಿಸುವುದು ಸರ್ಕಾರದ ಉದ್ದೇಶ ಎಂದು ತಿಳಿಸಿದ್ದಾರೆ. ನರೇಂದ್ರ ಮೋದಿ ಸರ್ಕಾರವು ಸಶಸ್ತ್ರ ಪಡೆಗಳ ಆಧುನೀಕರಣದ ಜೊತೆಗೆ ರಕ್ಷಣಾ ವಲಯದಲ್ಲಿ ಸ್ವಾವಲಂಬನೆಯ ಮೇಲೆ ಕೇಂದ್ರೀಕರಿಸಿದೆ. ರಕ್ಷಣಾ ವಲಯದಲ್ಲಿ ಸ್ವಾವಲಂಬನೆಯನ್ನು ಮತ್ತಷ್ಟು ಉತ್ತೇಜಿಸಲು ಮತ್ತು ಸಚಿವಾಲಯವು ೨೦೨೫ ಅನ್ನು ಸುಧಾರಣೆಗಳ ವರ್ಷವೆಂದು ಘೋಷಿಸಿದೆ ಎಂದು ರಾಜನಾಥ್ ಸಿಂಗ್ ಹೇಳಿದರು.

**ಧ್ವನಿ : ರಾಜನಾಥ್ ಸಿಂಗ್ (೨೫ ಸೆಕೆಂಡ್ಸ್)**

ವಿಕಸನಗೊಳ್ಳುತ್ತಿರುವ ನಮ್ಮ ದೇಶದ ರಕ್ಷಣಾ ಕ್ಷೇತದಲ್ಲಿ ಸ್ವಾವಲಂಬನೆ, ತಾಂತ್ರಿಕ ಪ್ರಗತಿಗಳು ಮತ್ತು ಮಿಲಿಟರಿ ವಲಯದಲ್ಲಿ ಕಾರ್ಯತಂತ್ರದ ಸುಧಾರಣೆಗಳ ಮೇಲೆ ಹೆಚ್ಚು ಗಮನ ಹರಿಸುವುದು ಈ ಸಮಾವೇಶದ ಉದ್ದೇಶವಾಗಿದೆ. ಇದು ರಕ್ಷಣಾ ಸುಧಾರಣೆಗಳು, ಸ್ಥಳೀಯ ಉತ್ಪಾದನೆ, ರಕ್ಷಣಾ ರಫ್ತುಗಳು ಮತ್ತು ಉದಯೋನ್ಮುಖ ತಂತ್ರಜ್ಞಾನಗಳಂತಹ ವಿಷಯಗಳ ಕುರಿತು ಫಲಕ ಚರ್ಚೆಗಳನ್ನು ಸಹ ಒಳಗೊಂಡಿದೆ.

<><><>

ವಕ್ಫ್ ತಿದ್ದುಪಡಿ ಕಾಯ್ದೆ - ೨೦೨೫ ಸಾಂವಿಧಾನಿಕ ಸಿಂಧುತ್ವವನ್ನು ಪ್ರಶ್ನಿಸುವ ಅರ್ಜಿಗಳನ್ನು ಸುಪ್ರೀಂ ಕೋರ್ಟ್ ಇಂದು ವಿಚಾರಣೆ ನಡೆಸಲಿದೆ. ಸುಪ್ರೀಂ ಕೋರ್ಟ್‌ನ ವೆಬ್‌ಸೈಟ್‌ನಲ್ಲಿ ಪ್ರಕಟವಾದ ಪಟ್ಟಿಯ ಪ್ರಕಾರ, ಭಾರತದ ಮುಖ್ಯ ನ್ಯಾಯಮೂರ್ತಿ ಸಂಜೀವ್ ಖನ್ನಾ ನೇತೃತ್ವದ ಪೀಠದಲ್ಲಿ ನ್ಯಾಯಮೂರ್ತಿಗಳಾದ ಸಂಜಯ್ ಕುಮಾರ್ ಮತ್ತು ಕೆ.ವಿ.ವಿಶ್ವನಾಥನ್ ಇಂದು ಈ ವಿಷಯವನ್ನು ವಿಚಾರಣೆಗೆ ಕೈಗೆತ್ತಿಕೊಳ್ಳಲಿದ್ದಾರೆ ಎಂದು ಐಎಎನ್ಎಸ್ ಸುದ್ದಿಸಂಸ್ಥೆ ವರದಿ ಮಾಡಿದೆ. ೧೯೯೫ ರ ವಕ್ಫ್ ಕಾಯ್ದೆಯಲ್ಲಿ ಇತ್ತೀಚೆಗೆ ಪರಿಚಯಿಸಲಾದ ತಿದ್ದುಪಡಿಗಳ ಸಾಂವಿಧಾನಿಕ ಸಿಂಧುತ್ವವನ್ನು ಪ್ರಶ್ನಿಸಿ, ಸುಪ್ರೀಂ ಕೋರ್ಟ್‌ಗೆ ಹಲವಾರು ಅರ್ಜಿಗಳು ಸಲ್ಲಿಕೆಯಾಗಿವೆ.

<><><>

ಬಂದರುಗಳು, ಮಲ್ಟಿಮೋಡಲ್ ಲಾಜಿಸ್ಟಿಕ್ಸ್ ಮತ್ತು MAITRI ಯಂತಹ ಡಿಜಿಟಲ್ ಪ್ಲಾಟ್‌ಫಾರ್ಮ್‌ಗಳ ಅಭಿವೃದ್ಧಿಯೊಂದಿಗೆ ಭಾರತವು ಆಧುನಿಕ ಕಡಲ ಕ್ರಾಂತಿಗೆ ಚಾಲನೆ ನೀಡುತ್ತಿದೆ ಎಂದು ಕೇಂದ್ರ ಬಂದರುಗಳು, ಹಡಗು ಮತ್ತು ಜಲಮಾರ್ಗಗಳ ಸಚಿವ ಸರ್ಬಾನಂದ ಸೋನಾವಾಲ್ ಹೇಳಿದ್ದಾರೆ. ನವದೆಹಲಿಯಲ್ಲಿ ನಡೆದ ಭಾರತ-ಮಧ್ಯಪ್ರಾಚ್ಯ-ಯುರೋಪ್ ಆರ್ಥಿಕ ಕಾರಿಡಾರ್-ಐಎಂಇಸಿ ಸಮ್ಮೇಳನ ೨೦೨೫ ಅನ್ನು ಉದ್ದೇಶಿಸಿ ಸಚಿವರು ಮಾತನಡಿದರು. ಐಎಂಇಸಿ ಜಾಗತಿಕ ಸಂಪರ್ಕದಲ್ಲಿ ಒಂದು ಪ್ರಮುಖ ಬದಲಾವಣೆ ತರುವಂತಹದ್ದಾಗಿದೆ. ಸುಸ್ಥಿರ ಮತ್ತು ಸುರಕ್ಷಿತ ವ್ಯಾಪಾರ ಮಾರ್ಗಗಳ ಮೂಲಕ ಭಾರತ, ಮಧ್ಯಪ್ರಾಚ್ಯ ಮತ್ತು ಯುರೋಪ್ ನಡುವಿನ ಸಂಪರ್ಕವನ್ನು ಬಲಪಡಿಸುತ್ತಿದೆ ಎಂದು ಅವರು ಹೇಳಿದ್ದಾರೆ. ಪ್ರಧಾನಿ ನರೇಂದ್ರ ಮೋದಿಯವರ ಮಹಾ-ಸಾಗರ್ ದೃಷ್ಟಿಕೋನದಡಿಯಲ್ಲಿ, ಸರ್ಕಾರವು ಮೂಲಸೌಕರ್ಯ, ಇಂಧನ ಮತ್ತು ಡೇಟಾವನ್ನು ಸಂಯೋಜಿಸಿ ಭಾರತವನ್ನು ಜಾಗತಿಕ ಕಡಲ ಶಕ್ತಿಯಾಗಿ ಇರಿಸುತ್ತಿದೆ, ಇದು ಪ್ರದೇಶಗಳಲ್ಲಿ ಬೆಳವಣಿಗೆ, ಸ್ಥಿರತೆ ಮತ್ತು ಸಹಕಾರವನ್ನು ಆಧಾರವಾಗಿರಿಸುತ್ತಿದೆ ಎಂದು ಸೋನಾವಾಲ್ ತಿಳಿಸಿದ್ದಾರೆ.

<><><>

ಇಂದು ವಿಶ್ವ ಹಿಮೋಫಿಲಿಯಾ ದಿನ. ಮಹಿಳೆಯರು ಮತ್ತು ಬಾಲಕಿಯರಲ್ಲಿಯೂ ರಕ್ತಸ್ರಾವ ಎಂಬುದು ಈ ವರ್ಷದ ಘೋಷ ವಾಕ್ಯವಾಗಿದೆ. ಈ ಕುರಿತು ಜಾಗೃತಿ ಮೂಡಿಸುವುದು ಹಾಗೂ ಮಹಿಳೆಯರ ಜೀವನ ಮಟ್ಟ ಉತ್ತಮಗೊಳಿಸುವ ಉದ್ದೇಶವನ್ನು ಹೊಂದಲಾಗಿದೆ. ಈ ನಿಟ್ಟಿನಲ್ಲಿ ವಿಶ್ವ ಆರೋಗ್ಯ ಸಂಸ್ಥೆ ಹಾಗೂ ಇತರೆ ಸಂಘ ಸಂಸ್ಥೆಗಳು ನಿರಂತರ ಅಭಿಯಾನಗಳನ್ನು ಕೈಗೊಳ್ಳುತ್ತಿದೆ. ಭಾರತದಲ್ಲಿಯೂ ಇಂದು ವಿಶೇಷ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ.

<><><>

ಕರ್ನಾಟಕ ರಾಜ್ಯದ ಹಲವು ಜಿಲ್ಲೆಗಳಲ್ಲಿ ಪೂರ್ವ ಮುಂಗಾರು ಆರ್ಭಟ ಮುಂದುವರಿಯಲಿದೆ. ಚಂಡಮಾರುತದ ಹಿನ್ನಲೆ, ಇಂದು ೧೮ ಜಿಲ್ಲೆಗಳಿಗೆ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ನಾಳೆಯಿಂದ ಮಳೆ ಪ್ರಮಾಣ ಕಡಿಮೆಯಾದರೂ ಕೆಲವು ಜಿಲ್ಲೆಗಳಿಗೆ ಮಳೆ ಮುನ್ಸೂಚನೆ ಅಲರ್ಟ್ ನೀಡಲಾಗಿದೆ. ಭಾರತೀಯ ಹವಾಮಾನ ಇಲಾಖೆ ಪ್ರಕಾರ, ಇಂದೂ ಕೂಡ ಮಳೆಯಾಗುವ ನಿರೀಕ್ಷೆಯಿದೆ. ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆ, ಗದಗ, ಹಾವೇರಿ, ಧಾರವಾಡ ಜಿಲ್ಲೆಗಳಲ್ಲಿ, ಚಿಕ್ಕಮಗಳೂರು, ಕೊಡಗು, ಮೈಸೂರು, ಚಾಮರಾಜನಗರ ಮತ್ತು ಹಾಸನ ಜಿಲ್ಲೆಗಳಲ್ಲಿ, ಮಂಡ್ಯ, ರಾಮನಗರ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ಕೋಲಾರ, ಚಿಕ್ಕಬಳ್ಳಾಪುರ, ತುಮಕೂರು ಮತ್ತು ಚಿತ್ರದುರ್ಗ ಜಿಲ್ಲೆಗಳಲ್ಲಿ ಗುಡುಗು ಸಹಿತ ಮಳೆಯಾಗಲಿದೆ. ಶಿವಮೊಗ್ಗ, ಬಳ್ಳಾರಿ, ದಾವಣಗೆರೆ ಮತ್ತು ವಿಜಯನಗರ ಜಿಲ್ಲೆಗಳಲ್ಲಿ ಒಣ ಹವೆ ಇರಲಿದೆ. ಏಪ್ರಿಲ್ ೧೯ ರವರೆಗೆ ಬೆಂಗಳೂರಿನಲ್ಲಿ ಪ್ರಧಾನವಾಗಿ ಮೋಡ ಕವಿದ ವಾತಾವರಣದೊಂದಿಗೆ ಹಗುರ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

<><><>

ಇಂಡಿಯನ್ ಪ್ರೀಮಿಯರ್ ಲೀಗ್ ಟಿ-೨೦ ಪಂದ್ಯಾವಳಿಯಲ್ಲಿ ಇಂದು ರಾತ್ರಿ ಮುಂಬೈನಲ್ಲಿ ನಡೆಯಲಿರುವ ಐಪಿಎಲ್ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ಮತ್ತು ಸನ್ ರೈಸರ್ಸ್ ಹೈದಾರಾಬಾದ್ ಮುಖಾಮುಖಿಯಾಗಲಿವೆ. ಉಭಯ ತಂಡಗಳಿಗೂ ಈ ಪಂದ್ಯ ಅತ್ಯಂತ ಮಹತ್ವದ್ದಾಗಿದೆ. ಮುಂಬೈ ಮತ್ತು ಹೈದರಾಬಾದ್ ನಡುವಿನ ಪಂದ್ಯ ಇಂದು ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ. ನವದೆಹಲಿಯ ಅರುಣ್

ಜೇಟ್ಲಿ ಕ್ರೀಡಾಂಗಣದಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ಹಾಗೂ ರಾಜಸ್ಥಾನ ನಡುವಿನ ಪಂದ್ಯ ಟೈ ಆಗಿದ್ದು, ನಂತರ ನಡೆದ ಸೂಪರ್ ಓವರ್‌ನಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ಗೆಲುವು ಸಾಧಿಸಿದೆ.

<><><><>

ಪೆರುವಿನ ಲಿಮಾದಲ್ಲಿ ನಡೆಯುತ್ತಿರುವ ೨೦೨೫ ರ ಐಎಸ್‌ಎಸ್‌ಎಫ್ ವಿಶ್ವಕಪ್ ಶೂಟಿಂಗ್ ಸ್ಪರ್ಧೆಯಲ್ಲಿ ಭಾರತದ ಜೋಡಿ ಇಂದರ್ ಸಿಂಗ್ ಸುರುಚಿ ಮತ್ತು ಸೌರಭ್ ಚೌಧರಿ ಚಿನ್ನದ ಪದಕ ಗಳಿಸಿದ್ದಾರೆ. ಪೆರುವಿನ ಲಿಮಾದಲ್ಲಿ ನಡೆದ ೧೦ ಮೀಟರ್ ಏರ್ ಪಿಸ್ತೂಲ್ ಮಿಶ್ರ ತಂಡ ಸ್ಪರ್ಧೆಯ ಫೈನಲ್‌ನಲ್ಲಿ ಚೀನಾದ ಜೋಡಿ ಕ್ವಿಯಾನ್ಕ್ಸುನ್ ಯಾವೊ ಮತ್ತು ಕೈ ಹು ಅವರನ್ನು ೧೬-೯ ಅಂಕಗಳಿಂದ ಸೋಲಿಸಿ ಭಾರತದ ಜೋಡಿ ಚಿನ್ನದ ಪದಕ ಗೆದ್ದುಕೊಂಡಿತು. ಇದಕ್ಕೂ ಮೊದಲು, ಒಲಿಂಪಿಕ್ ಪದಕ ವಿಜೇತೆ ಮನು ಭಾಕರ್ ಮತ್ತು ರವೀಂದರ್ ಸಿಂಗ್ ಅವರು ನಿರ್ಣಾಯಕ ಕಂಚಿನ ಪದಕ ಪಂದ್ಯದಲ್ಲಿ ಚೀನಾದ ಜೋಡಿ ಕ್ವಿಯಾಂಕೆ ಮಾ ಮತ್ತು ಯಿಫಾನ್ ಜಾಂಗ್ ವಿರುದ್ಧ ಪರಾಭವಗೊಂಡರು. ಇಂದು, ರೈಜಾ ಧಿಲ್ಲಾನ್ ಸ್ಕೀಟ್ ಮಹಿಳಾ ಫೈನಲ್‌ನಲ್ಲಿ ಸ್ಪರ್ಧಿಸಲಿದ್ದಾರೆ. ಅಂತಿಮ ಹಣಾಹಣಿ ಭಾರತೀಯ ಕಾಲಮಾನ ಮಧ್ಯಾಹ್ನ ೧:೩೦ ಕ್ಕೆ ಪ್ರಾರಂಭವಾಗಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>